**ಅ) <u>ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು</u>**

(ಗೊಂದಲ)

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, ಚುಕ್ಕೆ ಗುರುತಿಲ್ಲದೆ ಪ್ರಶ್ನೆಗಳ ಹತ್ತನೇ ಪಟ್ಟಿಯಲ್ಲಿರುವ ಎಲ್ಲಾ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರಗಳನ್ನು ಸಭೆಯ ಮುಂದಿಡುತ್ತೇನೆ.

**ರಾಜ್ಯದಲ್ಲಿ ಭೂಮಾಪಕರ ಕೊರತೆ**

1116 (1466) ಶ್ರೀ ಎಂ.ಎಸ್ ಆತ್ಮಾನಂದ (ಮಂಡ್ಯ ಕ್ಷೇತ್ರ) : ಮಾನ್ಯ ಕಂದಾಯಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ರಾಜ್ಯದಲ್ಲಿ ಭೂಮಾಪಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

2) ಹಾಗಿದ್ದಲ್ಲಿ ಈ ಕೊರತೆ ನಿವಾರಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆಯೇ?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

1) ಹೌದು

2) ಕರ್ನಾಟಕ ಭೂ ಕಂದಾಯ ಅಧಿನಿಯಮ 1964ಕ್ಕೆ ತಿದ್ದುಪಡಿ ತಂದು ಕಲಂ 18 (ಎ) ನ್ನು ಹೊಸದಾಗಿ ಸೇರಿಸಿದೆ. ಹಾಗೂ ತತ್ಸಂಬಂಧ ಕರ್ನಾಟಕ ಭೂ ಕಂದಾಯ ನಿಯಾಮವಳಿ 1966ಕ್ಕೆ ತಿದ್ದುಪಡಿ ತಂದು ಹೊಸದಾಗಿ "46ಎ" ಯಿಂದ "ಕೆ" ವರೆಗೆ ಸೇರಿಸಲಾಗಿದೆ. ಇದರನ್ವಯ ನಿಗಧಿತ ವಿದ್ಯಾರ್ಹತೆ ಮತ್ತು ತರಬೇತಿ ಪಡೆದ ಖಾಸಗೀ ಸರ್ವೇಯರ್‌ಗಳಿಗೆ ಲೈಸೆನ್ಸ್ ನೀಡಲು ಅವಕಾಶ ಕಲ್ಪಿಸಿದೆ.

**ರಾಜ್ಯದಲ್ಲಿ ವಿಧವಾ ಮಾಶಾಸನ ಹಾಗೂ ವೃದ್ಧಾಪ್ಯ ವೇತನ.**

1120 (1435) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ವಿಧವಾ ಮಾಶಾಸನ ಹಾಗೂ ವೃದ್ಧಾಪ್ಯ ವೇತನವನ್ನು ಪಡೆಯುತ್ತಿರುವವರ ಸಂಖ್ಯೆ ಎಷ್ಟು;

ಆ) ಅವರುಗಳಿಗೆ ಮಾಸಿಕವಾಗಿ ಎಷ್ಟು ಮೊತ್ತವನ್ನು ಪಾವತಿ ಮಾಡಲಾಗುತ್ತಿದೆ; ಈ ಮೊತ್ತವನ್ನು ವಿತರಣೆ ಮಾಡುವಲ್ಲಿ ಯಾವ ರೀತಿಯ ನಿಯಮವನ್ನು ಪಾಲಿಸಲಾಗುತ್ತಿದೆ.

ಇ) ಸರ್ಕಾರ ಇವರ ವೇತನಕ್ಕೆಂದು ಮೀಸಲಿಟ್ಟಿರುವ ಹಣದ ವ್ಯವಸ್ಥಿತವಾದ ರೀತಿಯಲ್ಲಿ ವಿತರಣೆಯಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಈ) ಹಾಗಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು?

ಶ್ರೀ ಹೆಚ್.ಸಿ ಶ್ರೀಕಂಠಯ್ಯ (ಕಂದಾಯ ಸಚಿವರು) :